## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಎಂ.ಎಸ್.ಬಿರಾದಾರ ಪಾಟೀಲ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಚಿಕ್ಕೋಡಿ, ಮತ್ತು ಶ್ರೀ ಎ.ಎಸ್.ಬೋರಗಾಂವಿ, ಹಿಂದಿನ ಪಂಚಾಯತ್ ಅಭಿವೃದ್ಧಿ ಅಧಿಕಾರಿ(ಪ್ರಭಾರ) ಚಿಕ್ಕಲವಾಳ ಗ್ರಾಮ ಪಂಚಾಯತಿ ಇವರುಗಳ ವಿರುದ್ಧದ ಜಂಟಿ ಇಲಾಖಾ ವಿಚಾರಣೆಯ- ಅಂತಿಮ ಆದೇಶ

ಓದಲಾಗಿದೆ:-1. ಸರ್ಕಾರದ ಸಮಸಂಖ್ಯೆಯ ಕಾರಣ ಕೇಳುವ ನೋಟಿಸು ದಿನಾಂಕ: 11.11.2013
2. ಶ್ರೀ ಎಂ.ಎಸ್.ಬಿರಾದಾರ ಪಾಟೀಲ್, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಚಿಕ್ಕೋಡಿ ರವರ ಲಿಖಿತ ರಕ್ಷಣಾ ಹೇಳಿಕೆ ದಿನಾಂಕ:28.11.2013
3. ಶ್ರೀ ಎ.ಎಸ್.ಬೋರಗಾಂವಿ, ಹಿಂದಿನ ಪ್ರಭಾರಿ ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಚಿಕ್ಕಳವಾಳ ಗ್ರಾಮ ಪಂಚಾಯಿತಿ(ಪ್ರಸ್ತುತ ಗ್ರೇಡ್-2 ಕಾರ್ಯದರ್ಶಿ, ವಾಳಕಿ) ಚಿಕ್ಕೋಡಿ, ರವರ ಲಿಖಿತ ರಕ್ಷಣಾ ಹೇಳಿಕೆ ದಿನಾಂಕ: 27.11.2013.
4. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 173 ವಿಸೇಟಿ 2013, ದಿ:05.11.2014
5. ವಿಚಾರಣಾಧಿಕಾರಿಯವರ ವರದಿ ದಿನಾಂಕ: 31.07.2015

****

ಪ್ರಸ್ತಾವನೆ:

ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ತಾಲ್ಲೂಕಿನ ಚಿಕ್ಕಲವಾಳ ಗ್ರಾಮ ಪಂಚಾಯತಿ ವ್ಯಾಪ್ತಿಯ ಪಾಂಗೇರಿ ಗ್ರಾಮದಲ್ಲಿ 2011-12ನೇ ಸಾಲಿನಲ್ಲಿ 09 ಎಕರೆ ಗಾಯರಾಣ ಜಮೀನಿನಲ್ಲಿ ನಿವೇಶನಗಳನ್ನು ಬಡವರಿಗೆ ಹಂಚಿಕೆ ಮಾಡುವ ಮಂಜೂರು ಮಾಡಿದ್ದರೂ ಸಹ, ನಿವೇಶನಗಳನ್ನು ಫಲಾನುಭವಿಗಳಿಗೆ ಹಂಚಿಕೆ ಮಾಡಲು ಆಸಕ್ತಿ ತೋರಿಸದೆ, ಕರ್ತವ್ಯಲೋಪವೆಸಗಿದ್ದ ಕಾರಣ ಹಾಗೂ ಫಲಾನುಭವಿಗಳಿಂದ ಅಕ್ರಮವಾಗಿ ವಂತಿಕೆಯನ್ನು ಪಡೆದಿರುವ ಆರೋಪದ ಮೇರೆಗೆ ಚಿಕ್ಕೋಡಿ ತಾಲ್ಲೂಕು ಪಂಚಾಯತ್‌ನ ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿಯಾದ ಶ್ರೀ ಎಂ.ಎಸ್.ಬಿರಾದಾರ ಪಾಟೀಲ್ ಹಾಗೂ ಹಿಂದಿನ ಪ್ರಭಾರಿ ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಚಿಕ್ಕಳವಾಳ ಗ್ರಾಮ ಪಂಚಾಯಿತಿ ಚಿಕ್ಕೋಡಿ ತಾಲ್ಲೂಕು, ಶ್ರೀ ಎ.ಎಸ್.ಬೋರಗಾಂವಿ ಇವರುಗಳಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 11 ರ ಪ್ರಕಾರ ಮೇಲೆ ಓದಲಾದ (1)ರ ದಿನಾಂಕ: 11.11.2013 ರಂದು ಜಾರಿ ಮಾಡಲಾಗಿದ್ದ ಕಾರಣ ಕೇಳುವ ನೋಟೀಸಿಗೆ ಅಧಿಕಾರಿಗಳು ಮೇಲೆ ಓದಲಾದ( 2ಮತ್ತು 3) ರಲ್ಲಿ ನೀಡಿದ್ದ ಲಿಖಿತ ರಕ್ಷಣಾ ಹೇಳಿಕೆಯು ತೃಪ್ತಿಕರವಾಗಿಲ್ಲದ ಕಾರಣ, ಪ್ರಕರಣದ ಸತ್ಯಾಸತ್ಯತೆಯನ್ನು ತಿಳಿಯಲು ಇವರ ಇಬ್ಬರ ವಿರುದ್ಧ ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ), ನಿಯಮಾವಳಿಗಳು 1957ರ ನಿಯಮ 11 ಸಹವಚನ 13ರ ಪ್ರಕಾರ ವಿವರವಾದ ಜಂಟಿ ಇಲಾಖಾ ವಿಚಾರಣೆಯನ್ನು ನಡೆಸಲು, ದಿನಾಂಕ: 05.11.2014ರ ಸರ್ಕಾರಿ ಆದೇಶದಲ್ಲಿ, ಅದೇ ನಿಯಮಾವಳಿಗಳ ನಿಯಮ -11 (2)ರ ಪ್ರಕಾರ ವಿಚಾರಣಾಧಿಕಾರಿಯನ್ನಾಗಿ ನೇಮಿಸಲಾಗಿದ್ದ ನಿವೃತ್ತ ಜಿಲ್ಲಾ ನ್ಯಾಯಾಧೀಶರಾದ ಶ್ರೀ ಎ.ಎಂ.ಪತ್ತಾರ, ಇವರು ಮೇಲೆ (5) ರಲ್ಲಿ ಓದಲಾದ ಪತ್ರ ದಿನಾಂಕ: 31.07.2015 ರೊಂದಿಗೆ ಶಿಸ್ತುಪ್ರಾಧಿಕಾರಿಯಾದ ಸರ್ಕಾರಕ್ಕೆ ವಿಚಾರಣಾ ವರದಿಯನ್ನು

ಸಲ್ಲಿಸಿರುತ್ತಾರೆ. ಈ ವಿಚಾರಣಾ ವರದಿಯಲ್ಲಿ ಆರೋಪಿತ ಅಧಿಕಾರಿಗಳ ವಿರುದ್ಧ ದಿನಾಂಕ: 11.11.2013ರ ದೋಷಾರೋಪಣ ಪಟ್ಟಿಯಲ್ಲಿ ಮಾಡಿರುವ ಆರೋಪಗಳು ರುಜುವಾತಾಗಿರುವುದಿಲ್ಲವೆಂದು ಅಭಿಪ್ರಾಯಪಟ್ಟಿರುತ್ತಾರೆ.

ವಿಚಾರಣಾ ವರದಿಯನ್ನು ಕೂಲಂಕಷವಾಗಿ ಪರಿಶೀಲಿಸಲಾಗಿದೆ. ಇಲಾಖಾ ವಿಚಾರಣೆಯಲ್ಲಿ ಪುನರ್ ಪರಿಶೀಲಿಸಬೇಕಾದಂತಹ ಗಂಭೀರ ಸ್ವರೂಪದ ಅಂಶಗಳು ಒಳಗೊಳ್ಳದೆ ಇರುವುದರಿಂದ, ವಿಚಾರಣಾ ವರದಿಯನ್ನು ಒಪ್ಪಿ ಅಧಿಕಾರಿಗಳನ್ನು ಆರೋಪಗಳಿಂದ ದೋಷಮುಕ್ತಗೊಳಿಸಲು ಸರ್ಕಾರವು ತೀರ್ಮಾನಿಸಿದೆ. ಆದುದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 173 ವಿಸೇಇ 2013 ಬೆಂಗಳೂರು ದಿನಾಂಕ: 16-03-2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಮೇರೆಗೆ, ಶ್ರೀ ಎಂ.ಎಸ್.ಬಿರಾದಾರ ಪಾಟೀಲ್, ಚಿಕ್ಕೋಡಿ ತಾಲ್ಲೂಕು ಪಂಚಾಯತ್‌ನ ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ (ಪ್ರಸ್ತುತ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಹುಕ್ಕೇರಿ) ಹಾಗೂ ಶ್ರೀ ಎ.ಎಸ್.ಬೋರಗಾಂವಿ ಹಿಂದಿನ ಪ್ರಭಾರಿ ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಚಿಕ್ಕಲವಾಳ ಗ್ರಾಮ ಪಂಚಾಯಿತಿ ಚಿಕ್ಕೋಡಿ ತಾಲ್ಲೂಕು, ಇವರುಗಳನ್ನು ದಿನಾಂಕ: 11.11.2013ರ ದೋಷಾರೋಪಣ ಪಟ್ಟಿಯಲ್ಲಿ ಮಾಡಿರುವ ಆರೋಪಗಳಿಂದ ದೋಷಮುಕ್ತಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

16/3/16

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಬಿ &ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ,

1) ಮಹಾಲೇಖಪಾಲರು(ಜಿ&ಎಸ್‌ಎಸ್‌ಎ)/(ಇ&ಆರ್‌ಎಸ್‌ಎ)/(ಎ&ಇ) ರವರ ಕಾರ್ಯದರ್ಶಿ, ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-01
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಳಗಾವಿ
3) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ (ಪಂ.ರಾಜ್)/ ಜಂಟಿ ಕಾರ್ಯದರ್ಶಿ (ಆಡಳಿತ-2) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
4) ಸಂಬಂಧಿಸಿದ ಅಧಿಕಾರಿಗಳಿಗೆ.
5) ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅಪಂ.ರಾಜ್ ಇಲಾಖೆ
6) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.